# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 128 | Pages. 2 | Date: 23-04-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 128 - ಪುಟಗಳು : 2 | 23-04-2026 | ಗುರುವಾರ | Ph: 8762954248 | ದರ : ₹1


# ಹೇಮಾವತಿ ಜಲಾಶಯ ನೀರಿನ ಪ್ರಮಾಣ ಇಳಿಕೆ

## ದಿನದಿಂದ ದಿನಕ್ಕೆ ಹೆಚ್ಚುತ್ತಿದೆ ಬೇಸಿಗೆ ಬೇಗೆ I ಕುಡಿಯುವ ನೀರಿಗೂ ತತ್ವಾರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಈ ಬಾರಿ ಬಿಸಿಲ ಬೇಗೆ ವಿಪರೀತವಾಗಿದ್ದು ಕುಡಿಯುವ ನೀರಿಗೆ ತತ್ವಾರ ಎದುರಾಗುವ ಆತಂಕ ಸೃಷ್ಟಿಯಾಗಿದೆ. ಬಿಸಿಲ ತಾಪ ನಿರೀಕ್ಷೆಗೂ ಮೀರಿ ಹೆಚ್ಚಾಗಿರುವುದರಿಂದ ಕೆರೆ-ಕಟ್ಟೆಗಳ ಒಡಲು ಮಾತ್ರವಲ್ಲದೆ ಜಲಾಶಯಗಳೂ ಸಹ ಕ್ರಮೇಣ ಬರಿದಾಗುತ್ತಿವೆ.

ಇದರಿಂದ ಕೃಷಿ ಬೆಳೆಗಳಿಗೆ ನೀರು ಸಿಗುವುದಿರಲಿ, ಜನ ಜಾನುವಾರುಗಳಿಗೆ ಕುಡಿಯುವ ನೀರಿಗೆ ತತ್ವಾರ ಉಂಟಾಗುವ ಆತಂಕ ಎದುರಾಗಿದೆ. ಜಿಲ್ಲೆಯ ಜೀವನದಿ ಹೇಮಾವತಿ ಜಲಾಶಯದಲ್ಲೂ ಕಳೆದ ವರ್ಷಕ್ಕಿಂತ ನೀರಿನ ಪ್ರಮಾಣ ಕೊಂಚ ಕಡಿಮೆಯಾಗಿರುವುದು ಕಳವಳ ತರಿಸಿದೆ.

2922 ಅಡಿ ಗರಿಷ್ಠ ಮಟ್ಟದ ಹೇಮಾವತಿ ಜಲಾಶಯದಲ್ಲಿ 2896.65 ಅಡಿ ನೀರಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 2899.45 ಅಡಿ ನೀರಿತ್ತು. ಕಳೆದ ವರ್ಷಕ್ಕೆ ಹೋಲಿಸಿದರೆ ಈ ಸಲ 2.8 ಅಡಿ ನೀರು ಜಲಾಶಯದಲ್ಲಿ ಕಡಿಮೆ ಇದೆ. ಒಟ್ಟು 37.103 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯದ ಜಲಾಶಯದಲ್ಲಿ ಹಾಲಿ 17.796 ಟಿಎಂಸಿ ನೀರಿದೆ. ಇದರಲ್ಲಿ ಬಳಸಬಹುದಾದ ನೀರು 13.424 ಟಿಎಂಸಿ ಮಾತ್ರ. ಕಳೆದ ವರ್ಷ ಇದೇ ದಿನ 19.373 ಟಿಎಂಸಿ ನೀರಿತ್ತು. ಜಲಾಶಯಕ್ಕೆ ಕೇವಲ33 ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, ಮುಖ್ಯ ನದಿಯ ಮೂಲಕ 415 ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ. ನಾಲೆಗಳಲ್ಲಿ ನೀರು ಹರಿಸುವುದನ್ನು ಸಂಪೂರ್ಣ ನಿಲ್ಲಿಸಲಾಗಿದೆ.

ಹಾಲಿ ಹೇಮಾವತಿ ಜಲಾಶಯದಲ್ಲಿರುವ ನೀರು ನಾಲ್ಕು ಜಿಲ್ಲೆಗಳ ವ್ಯಾಪ್ತಿಯ 24 ತಾಲ್ಲೂಕುಗಳಲ್ಲಿ ಕುಡಿಯಲು ಮಾತ್ರ ಆದರೆ ಸದ್ಯಕ್ಕೆ ಸಮಸ್ಯೆ ತಲೆ ದೋರದು. ಆದರೆ ಹೇಮಾವತಿಯಿಂದ ಕೆ.ಆರ್.ಎಸ್. ಜಲಾಶಯಕ್ಕೆ ನೀರು ಬಸಿದರೆ ಹೇಮಾವತಿ ಜಲಾಶಯದ ಒಡಲು ಬರಿದಾಗಿ, ಇದನ್ನೇ ನಂಬಿರುವ ಜನರಿಗೆ ಆತಂಕ ಎದುರಾಗುವ ಸಾಧ್ಯತೆಯನ್ನು ಅಲ್ಲಗಳೆಯುವಂತಿಲ್ಲ.

ಹಾಗಾಗದಿರಲಿ ಎಂದು ಎಲ್ಲರ ಪ್ರಾರ್ಥನೆಯಾಗಿದೆ. ಈಗಾಗಲೇ ಪೂರ್ವ ಮುಂಗಾರಿನಲ್ಲಿ ಮಳೆಯ ಕೊರತೆ ಕಡಿಮೆಯಾಗಿದೆ. ಮುಂದೆಯೂ ವರುಣ ಕೃಪೆ ತೋರದೆ ಇದ್ದರೆ ಜಲಾಶಯಕ್ಕೆ ನೀರು ಸಂಗ್ರಹ ಆಗದೆ ನೀರಿಗೆ ಸಮಸ್ಯೆ ಎದುರಾಗುವ ಸಾಧ್ಯತೆಯನ್ನು ಅಲ್ಲಗಳೆಯುವಂತಿಲ್ಲ.

### 32 ಹಳ್ಳಿಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆ

ಜಿಲ್ಲೆಯ 32 ಗ್ರಾಮಗಳಲ್ಲಿ ಕುಡಿಯುವ ನೀರಿಗೆ ತತ್ವಾರ ಎದುರಾಗಿದೆ. ಜಿಲ್ಲಾ ಪಂಚಾಯಿತಿಯ ಕುಡಿಯುವ ನೀರು ಸರಬರಾಜು ವಿಭಾಗದಿಂದ ವರದಿ ತರಿಸಿಕೊಂಡಿದ್ದು, 32 ಹಳ್ಳಿಗಳಿಗೆ ಖಾಸಗಿ ಬೋರವೆಲ್ ಮೂಲಕ ನೀರಿನ ವ್ಯವಸ್ಥೆ ಮಾಡಲಾಗಿದೆ. ಆಲೂರಿನ 4, ಅರಕಲಗೂಡು ತಾಲ್ಲೂಕಿನ 4, ಬೇಲೂರಿನಲ್ಲಿ 9, ಚನ್ನರಾಯಪಟ್ಟಣ 4 ಹಾಗು ಹಾಸನದಲ್ಲಿ 11 ಹಳ್ಳಿಗಳಲ್ಲಿ ಸಮಸ್ಯೆ ತಲೆದೋರಿದೆ. ಖಾಸಗಿ ಬೋರವೆಲ್ ಮಾಲೀಕರಿಗೆ ಸರ್ಕಾರದಿಂದ ಹಣ ನೀಡಿ ನೀರು ಖರೀದಿಸಲಾಗುತ್ತಿದೆ. ಹಾಸನ ತಾಲ್ಲೂಕಿನ ಶಂಕರನಹಳ್ಳಿಯಲ್ಲಿ ಮಾತ್ರ ಒಬ್ಬ ರೈತರು ಉಚಿತವಾಗಿ ನೀರು ಕಲ್ಪಿಸುತ್ತಿದ್ದಾರೆ.

# ಬಿತ್ತನೆ ಬೀಜ-ರಸಗೊಬ್ಬರಕ್ಕೆ ಅಭಾವ ಆಗದಂತೆ ಸೂಚನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪೂರ್ವ ಮುಂಗಾರು ಹಂಗಾಮು ಪ್ರಾರಂಭವಾಗಿದ್ದು, ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ದಾಸ್ತಾನಿಕರಿಸಲು ಕ್ರಮ ವಹಿಸುವಂತೆ ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ 2026-27ರ ಮುಂಗಾರು ಹಂಗಾಮಿನ ರಸಗೊಬ್ಬರ ಸಮರ್ಪಕ ಸರಬರಾಜು ಮತ್ತು ವಿತರಣೆ ಕುರಿತ ಸಭೆಯಲ್ಲಿ ಮಾತನಾಡಿ, ರಸಗೊಬ್ಬರ ಮಳಿಗೆಗಳಲ್ಲಿ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡದಂತೆ ಎಚ್ಚರ ವಹಿಸಬೇಕು ಎಂದರು.

ರಸಗೊಬ್ಬರ ಮಳಿಗೆಗಳಲ್ಲಿ ಗೊಬ್ಬರ ದಾಸ್ತಾನು ಹಾಗೂ ದರಪಟ್ಟಿಯನ್ನು ಕಡ್ಡಾಯವಾಗಿ ಪ್ರದರ್ಶಿಸುವುದು, ಜಿಲ್ಲೆಯ ಎಲ್ಲಾ ರಸಗೊಬ್ಬರ ಪರಿವೀಕ್ಷಕರು, ಕಡ್ಡಾಯವಾಗಿ ತಮ್ಮ ವ್ಯಾಪ್ತಿಯಲ್ಲಿ ಬರುವ ರಸಗೊಬ್ಬರ ಮಳಿಗೆಗಳಿಗೆ ಭೇಟಿ ನೀಡಿ ರಸಗೊಬ್ಬರ ದಾಸ್ತಾನು ಪರಿಶೀಲಿಸಬೇಕು. ಕೃತಕ ಅಭಾವ ಸೃಷ್ಟಿಯಾಗದಂತೆ ನೋಡಿಕೊಳ್ಳುವಂತೆ ತಿಳಿಸಿದರು.

ರಸಗೊಬ್ಬರ ಮಳಿಗೆಗಳಲ್ಲಿ ಹಾಲಿ ದಾಸ್ತಾನು ಇರುವ ರಸಗೊಬ್ಬರಕ್ಕೂ ಪಿಒಎಸ್ ಮಷೀನ್‌ನಲ್ಲಿರುವ ರಸಗೊಬ್ಬರಕ್ಕೆ ಹೋಲಿಕೆ ಮಾಡಿ ವ್ಯತ್ಯಾಸವಿದ್ದಲ್ಲಿ ಸರಿಪಡಿಸಬೇಕು, ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ಪಿಒಎಸ್ ಮಷೀನ್‌ನಲ್ಲಿಯೇ ರಸಗೊಬ್ಬರಗಳನ್ನು ವಿತರಣೆ ಮಾಡಲು ಕ್ರಮವಹಿಸಿಬೇಕು ಎಂದರು. 2026-27ನೇ ಸಾಲಿನಲ್ಲಿ ಜಿಲ್ಲೆಗೆ ನಿಗದಿಪಡಿಸಿದ ರಸಗೊಬ್ಬರದಲ್ಲಿ ಸರಬರಾಜುದಾರರು ಶೇ. 25 ರಷ್ಟು ರಸಗೊಬ್ಬರವನ್ನು ಕಾಪು ದಾಸ್ತಾನಿನಲ್ಲಿ ಇರಿಸಬೇಕು. ಯೂರಿಯಾ ರಸಗೊಬ್ಬರವನ್ನು ಪಿಒಎಸ್ ಮಷಿನ್ ಜೊತೆಗೆ ಕಡ್ಡಾಯವಾಗಿ ಇಲಾಖೆಯ ಕೆ-ಕಿಸಾನ್ ತಂತ್ರಾಂಶದ ಮೂಲಕ ರೈತರ ಎಫ್‌ಐಡಿ/ಆಧಾರ್ ಸಂಖ್ಯೆಯನ್ನು ನೊಂದಣಿ ಮಾಡಿಕೊಂಡು ಯೂರಿಯಾ ರಸಗೊಬ್ಬರವನ್ನು ವಿತರಿಸುವಂತೆ ನಿರ್ದೇಶನ ನೀಡುವಂತೆ ತಿಳಿಸಿದರು.

ರಸಗೊಬ್ಬರ ಬಳಕೆ ಕಡಿಮೆ ಮಾಡಿ ಸಾವಯವ ಗೊಬ್ಬರ ಬಳಕೆ ಮಾಡುವಂತೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅರಿವು ಮೂಡಿಸುವುದರ ಜೊತೆಗೆ ನೈಸರ್ಗಿಕ ಕೃಷಿಗೆ ಹೆಚ್ಚು ಒತ್ತು ನೀಡುವಂತೆ ಕೃಷಿಕರಿಗೆ ತಿಳುವಳಿಕೆ ನೀಡಲಾಗುತ್ತಿದೆ ಹಾಗೂ ನ್ಯಾನೋ ಯೂರಿಯಾ ಬಳಕೆಗೆ ಉತ್ತೇಜಿಸಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ರಮೇಶ್ ಅವರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ರಸಗೊಬ್ಬರ ಹಾಗೂ ಬಿತ್ತನೆ ಬೀಜ ವರ್ತಕರು ಉಪಸ್ಥಿತರಿದ್ದರು.

# ಜಮೀನು ಸಂಪರ್ಕಿಸುವ ದಾರಿ ಬಂದ್: ಅಳಲು




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಸೀಕೆರೆ ತಾಲ್ಲೂಕು ಗಂಡಸಿ ಹೋಬಳಿ ಜೆ.ಹೊನ್ನೇನಹಳ್ಳಿ ಗ್ರಾಮದ ಸರ್ವೆ ನಂ.110/1ರ 2 ಎಕರೆ ಕೃಷಿ ಜಮೀನಿಗೆ ದಾರಿ ಕೊಡದೆ ವ್ಯಕ್ತಿಯೊಬ್ಬರು ಕಿರುಕುಳ ನೀಡುತ್ತಿದ್ದಾರೆಂದು ವೃದ್ಧ ದಂಪತಿ ಹೊನ್ನೇಗೌಡ ಹಾಗೂ ಲತಮ್ಮ ಅಳಲು ತೋಡಿಕೊಂಡರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, ಜಮೀನಿನ ಪಹಣಿ ಖಾತೆ ನಮ್ಮ ಹೆಸರಿನಲ್ಲೇ ಇದ್ದು, ಹಲವು ವರ್ಷಗಳಿಂದ ಸಾಗುವಳಿ ಮಾಡಿಕೊಂಡಿದ್ದೇವೆ. ಇತ್ತೀಚೆಗೆ ಜಮೀನಿಗೆ ಹೋಗುವ ದಾರಿಗೆ ಪಕ್ಕದ ಹಳ್ಳಿಯ ಎಲ್. ಹೊನ್ನೇನಹಳ್ಳಿ ಗ್ರಾಮದ ಶಿವಕುಮಾರ ಹಾಗೂ ಸವಿತಾ ಎಂಬುವರು ಪ್ರಮುಖ ದಾರಿಗೆ ಕಂದಕ ನಿರ್ಮಿಸಿ ಸಂಚಾರಕ್ಕೆ ತಡೆ ಉಂಟುಮಾಡಿದ್ದಾರೆ ಎಂದರು. ಅದರಿಂದ ಜಮೀನಿಗೆ ತೆರಳುವುದು ಕಷ್ಟಕರವಾಗಿದೆ. ಬೆಳೆಗಳ ಪಾಲನೆ, ನೀರಾವರಿ ಇತರ ಕೃಷಿ ಚಟುವಟಿಕೆ ಸಂಪೂರ್ಣ ಅಸ್ತವ್ಯಸ್ತಗೊಂಡಿವೆ. ಈ ಸಮಸ್ಯೆಯನ್ನು ಹಿಂದೆಯೂ ಗ್ರಾಮಸ್ಥರ ಗಮನಕ್ಕೆ ತಂದು ಪಂಚಾಯಿತಿ ನಡೆಸಲಾಗಿತ್ತು. ಆ ಸಂದರ್ಭದಲ್ಲಿ ಗ್ರಾಮದ ಹಿರಿಯರು ಮಧ್ಯಸ್ಥಿಕೆ ವಹಿಸಿ ದಾರಿ ಕಲ್ಪಿಸುವಂತೆ ಸೂಚನೆ ನೀಡಿದ್ದರು. ಆ ಬಳಿಕ ಕೆಲಕಾಲ ಸಮಸ್ಯೆ ಬಗೆಹರಿದಂತಾಗಿದ್ದರೂ, ಇದೀಗ ಮತ್ತೆ ಅದೇ ಸಮಸ್ಯೆ ತಲೆದೋರಿದ್ದು ತೀವ್ರ ಸಂಕಷ್ಟ ತಂದಿದೆ. ಈ ಕುರಿತು ಪ್ರಶ್ನಿಸಲು ಹೋದಾಗ ದರ್ಪದಿಂದ ವರ್ತಿಸಿ, ಜೀವ ಬೆದರಿಕೆ ಹಾಕುತ್ತಿರುವುದಾಗಿ ಆರೋಪಿಸಿದರು.

ಕೃಷಿಯೇ ನಮ್ಮ ಕುಟುಂಬದ ಪ್ರಮುಖ ಆಧಾರವಾಗಿರುವುದರಿಂದ, ಜಮೀನಿನ ಬೆಳೆ ಹಾನಿಯಾಗುವ ಭೀತಿ ಕೂಡ ಎದುರಾಗಿದೆ. ಪೊಲೀಸ್ ಇಲಾಖೆ ಹಾಗೂ ಸ್ಥಳೀಯ ಆಡಳಿತ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ದಾರಿ ಸಮಸ್ಯೆ ಬಗೆಹರಿಸಬೇಕು. ನಾವು ಅನಾರೋಗ್ಯದಿಂದ ಬಳಲುತ್ತಿದ್ದು ಜೀವಕ್ಕೆ ಹಾನಿಯುಂಟಾದರೆ ಅವರೇ ಕಾರಣರಾಗುತ್ತಾರೆ ಎಂದರು.

# ಸಕಲೇಶಪುರದಲ್ಲಿ ಏ. 25-26ರಂದು ಕ್ರಿಕೆಟ್ ಪಂದ್ಯಾವಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸರ್ಕಾರಿ ಹಾಗೂ ಹೊರಗುತ್ತಿಗೆ ನೌಕರರು ಮತ್ತು ಕಾರ್ಯನಿರತ ಪತ್ರಕರ್ತರಿಗೆ ಅಫೀಷಿಯಲ್ಸ್ ಕ್ರಿಕೆಟ್ ಲೀಗ್ ಪಂದ್ಯಾವಳಿಯನ್ನು ಏ. 25 ಮತ್ತು 26ರಂದು ನಗರದ ಸುಭಾಷ್ ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ನಿಯೋಜಿತ ಅಧ್ಯಕ್ಷ ಸುಧೀರ್ ಭಟ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ, 46 ಕನ್ನಡ ಹಾಗೂ ಫಾಸ್ಟ್ ನ್ಯೂಸ್ ಸಂಯುಕ್ತ ಆಶ್ರಯದಲ್ಲಿ ಪಂದ್ಯಾವಳಿ ನಡೆಯಲಿದೆ ಎಂದರು. ಒಟ್ಟು 14 ತಂಡಗಳು ಭಾಗವಹಿಸಲಿದ್ದು, ಪ್ರತಿ ಪಂದ್ಯ 4 ಓವರ್‌ಗಳಾಗಿರುತ್ತದೆ. ಕಾರ್ಯಕ್ರಮಕ್ಕೆ ಹಲವು ಮುಖಂಡರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಹಕಾರ ನೀಡಿದ್ದಾರೆ. ಫೈನಲ್ ಪಂದ್ಯಕ್ಕೆ ಮಾತ್ರ ತೃತೀಯ ಅಂಪೈರ್ ವ್ಯವಸ್ಥೆ ಇರಲಿದೆ ಎಂದರು.




ಜಿಲ್ಲೆಯ ಸರ್ಕಾರಿ ಹಾಗೂ ಹೊರಗುತ್ತಿಗೆ ನೌಕರರು ಈ ಪಂದ್ಯಾವಳಿಯಲ್ಲಿ ಭಾಗವಹಿಸಲು ಅವಕಾಶವಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಭಿಮಾನಿಗಳು ಹಾಗೂ ಸಾರ್ವಜನಿಕರು ಭಾಗವಹಿಸುವಂತೆ ಮನವಿ ಮಾಡಿದರು.

ನಿಕಟಪೂರ್ವ ಅಧ್ಯಕ್ಷ ಜೈಭೀಮ್ ಮಂಜುನಾಥ್ ಮಾತನಾಡಿ, ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ತಂಡಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ಆಟಗಾರರು ಕಡ್ಡಾಯವಾಗಿ ಸರ್ಕಾರಿ ಸೇವೆಯಲ್ಲಿ ಇರಬೇಕು ಹಾಗೂ ಗುರುತಿನ ಚೀಟಿ ಪ್ರದರ್ಶಿಸಬೇಕು ಎಂದು ತಿಳಿಸಿದರು. ಪಂದ್ಯಾವಳಿಯನ್ನು ಶಾಸಕ ಸಿಮೆಂಟ್ ಮಂಜುನಾಥ್ ಉದ್ಘಾಟಿಸಲಿದ್ದು, ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಮುರುಳಿ ಮೋಹನ್ ಹಾಗೂ ಮಾಜಿ ಶಾಸಕ ಮತ್ತು ಮಾಜಿ ಸಚಿವ ಹೆಚ್. ಕೆ.ಕುಮಾರಸ್ವಾಮಿ ಭಾಗವಹಿಸಲಿದ್ದಾರೆ ಎಂದರು.

ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ರವಿಕುಮಾರ್ ಮಾತನಾಡಿ, ಈ ಪಂದ್ಯಾವಳಿ ಮೂಲಕ ಪತ್ರಕರ್ತರು ಹಾಗೂ ಸರ್ಕಾರಿ ನೌಕರರ ನಡುವೆ ಬಾಂಧವ್ಯ ವೃದ್ಧಿಯಾಗಲಿದೆ ಎಂದು ಹೇಳಿದರು. ಉದ್ಘಾಟನಾ ಸಮಾರಂಭದಲ್ಲಿ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಹಾಗೂ ರಾಜ್ಯ ಉಪಾಧ್ಯಕ್ಷ ಮದನ್ ಗೌಡ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಪ್ರಥಮ ಬಹುಮಾನ 33,333 ರೂ. ಹಾಗೂ ಪಾರಿತೋಷಕ, ದ್ವಿತೀಯ ಬಹುಮಾನ 22,222 ರೂ. ಹಾಗೂ ಪಾರಿತೋಷಕ ನೀಡಲಾಗುತ್ತದೆ. ಜೊತೆಗೆ ಪ್ರತಿಯೊಂದು ಪಂದ್ಯಕ್ಕೂ ಪಂದ್ಯ ಶ್ರೇಷ್ಠ, ಉತ್ತಮ ಬೌಲರ್, ಉತ್ತಮ ಬ್ಯಾಟರ್ ಮತ್ತು ಉತ್ತಮ ಫೀಲ್ಡರ್‌ಗೆ ವಿಶೇಷ ಬಹುಮಾನಗಳಿದ್ದು, ಸರಣಿ ಶ್ರೇಷ್ಠ ಆಟಗಾರನಿಗೂ ಗೌರವ ನೀಡಲಾಗುತ್ತದೆ ಎಂದು ವಿವರಿಸಿದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಯೋಗೇಶ್ ಮಾತನಾಡಿ, ಪ್ರವೇಶ ಶುಲ್ಕ 3,333 ರೂ. ಆಗಿದ್ದು, ಏ. 15ರೊಳಗೆ ಪಾವತಿಸಬೇಕು. ಪಂದ್ಯಾವಳಿಯ ವಿಶೇಷತೆ ಎಂದರೆ 46 ಕನ್ನಡ ವಾಹಿನಿಯಲ್ಲಿ ನೇರ ಪ್ರಸಾರ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಂಡಗಳ ಜರ್ಸಿ ಬಿಡುಗಡೆ ಮಾಡಲಾಯಿತು. ಜಿಲ್ಲಾ ಆದಿವಾಸಿ ಸಂಚಾಲಕ ನವೀನ್ ಸದಾ, ನಿಕಟಪೂರ್ವ ಕಾರ್ಯದರ್ಶಿ ದಯಾನಂದ್ ಹಾಗೂ ಸಾಸು ವಿಶ್ವನಾಥ್ ಉಪಸ್ಥಿತರಿದ್ದರು.

# ಸುಳ್ಳಕ್ಕಿಯಲ್ಲಿ ರಸ್ತೆಗೆ ಅಳವಡಿಸಿದ್ದ ಹಂಪ್ಸ್ ಧ್ವಂಸ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಸುಳ್ಳಕ್ಕಿ ಗ್ರಾಮದಲ್ಲಿ ಅಕ್ರಮ ಮರಳು ದಂಧೆಕೋರರ ಗೂಂಡಾವರ್ತನೆ ಮತ್ತೆ ತಲೆದೋರಿದ್ದು, ಅಂಗನವಾಡಿ ಹಾಗೂ ಶಾಲಾ ಮಕ್ಕಳ ಸುರಕ್ಷತೆಗೆ ಹಾಕಲಾಗಿದ್ದ ರಸ್ತೆ ಹಂಪ್‌ಗಳನ್ನು ಧ್ವಂಸಗೊಳಿಸಿರುವ ಘಟನೆ ನಡೆದಿದೆ.

ಮರಳು ತುಂಬಿದ ಟಿಪ್ಪರ್ ಹಾಗೂ ಟ್ರ್ಯಾಕ್ಟರ್‌ಗಳು ಅತಿವೇಗದಲ್ಲಿ ಸಂಚರಿಸಲು ಅಡ್ಡಿಯಾಗುತ್ತಿದೆ ಎಂಬ ಕಾರಣ ನೀಡಿ, ದಂಧೆಕೋರರು ಗುದ್ದಲಿ, ಪಿಕಾಸಿ ಬಳಸಿ ಹಂಪ್ಸ್ ಒಡೆದು ಹಾಕಿ ರಸ್ತೆಯನ್ನೇ ಹಾನಿಗೊಳಿಸಿದ್ದಾರೆ. ಮಕ್ಕಳ ಸುರಕ್ಷತೆಯನ್ನು ಸಂಪೂರ್ಣ ನಿರ್ಲಕ್ಷ್ಯ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದೆ.

ಇದೇ ವಿಷಯವಾಗಿ ಗ್ರಾಮ ಪಂಚಾಯಿತಿಗೆ ದೂರು ನೀಡಲಾಗಿದ್ದರೂ, ಗ್ರಾಮಸ್ಥರ ತೀವ್ರ ವಿರೋಧದಿಂದ ಹಂಪ್ಸ್ ತೆರವು ಕಾರ್ಯ ನಿಲ್ಲಿಸಲಾಗಿತ್ತು. ಆದರೂ ಯಾವುದೇ ಅನುಮತಿ ಪಡೆಯದೇ ಏಕಾಏಕಿ ಹಂಪ್ಸ್ ತೆರವುಗೊಳಿಸಲಾಗಿದೆ.

ಗ್ರಾಮದ ರಸ್ತೆಗಳನ್ನು ಅಕ್ರಮ ದಂಧೆಗಾಗಿ ಬಳಸಿಕೊಂಡು, ಸಾರ್ವಜನಿಕ ಸುರಕ್ಷತೆಯನ್ನು ಪಣಕ್ಕಿಟ್ಟು ನಡೆಸುತ್ತಿರುವ ಈ ದೌರ್ಜನ್ಯಕ್ಕೆ ಕಡಿವಾಣ ಹಾಕಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ. ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಕೂಡಲೇ ದೋಷಿಗಳ ವಿರುದ್ಧ ಕಠಿಣ ಕ್ರಮ ಕೈಗೊಂಡು, ಧ್ವಂಸಗೊಂಡ ಹಂಪ್ಸ್‌ಗಳನ್ನು ಮರುಸ್ಥಾಪಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ನಾಳೆ ರಾಜ್ಯಾದ್ಯಂತ ಜೈಸತ್ಯಂ ಚಿತ್ರ ಬಿಡುಗಡೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅತಿಯಾಗಿ ಮೊಬೈಲ್ ಬಳಕೆ ಮಾಡದಂತೆ ಮೊದಲು ಪೋಷಕರು ನಂತರ ಮಕ್ಕಳಿಗೆ ತಿಳಿವಳಿಕೆ ನೀಡುವ ಉದ್ದೇಶದಿಂದ ನಿರ್ಮಾಣ ಮಾಡಿರುವ ಜೈ ಸತ್ಯಂ ಚಿತ್ರವು ಇದೇ ತಿಂಗಳ 24ರಂದು ಬಿಡುಗಡೆ ಆಗಲಿದೆ ಎಂದು ನಿರ್ದೇಶಕ ಕೆ.ಈಶ್ವರಬಾಬು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಇದು ಮಕ್ಕಳಿಗೆ ಮಾರ್ಗದರ್ಶನ ಮತ್ತು ಪೋಷಕರಿಗೆ ಪ್ರೇರಣೆ ನೀಡುವ ಉದ್ದೇಶದಿಂದ ನಿರ್ಮಿಸಿರುವ ಚಿತ್ರ ಎಂದರು.

ಹಾಸನ, ಕಂಚಮಾರನಹಳ್ಳಿ ಮತ್ತು ರಾಯಪುರ ಮೊದಲಾದ ಕಡೆಗಳಲ್ಲಿ ಚಿತ್ರೀಕರಣ ಮಾಡಲಾಗಿದ್ದು, ಒಟ್ಟು ಐದು ಹಾಡುಗಳಿವೆ. ಸಿನಿಮಾ ಅವಧಿ 1.33 ಗಂಟೆ ಎಂದು ವಿವರಿಸಿದರು. ಕಂಚಮಾರನಹಳ್ಳಿ ಕಾಂತಣ್ಣ ಮೊದಲಾದವರು ಎಲ್ಲ ಸಹಕಾರ ನೀಡಿದರು ಎಂದರು.

ಜೈ ಮತ್ತು ಸತ್ಯಂ ಎಂಬ ಎರಡು ವಿಭಿನ್ನ ವ್ಯಕ್ತಿತ್ವಗಳ ಮೂಲಕ ಜೀವನದ ಮಹತ್ವ ತೋರಿಸಲಾಗಿದೆ.

ಜೈ ಎಂಬ ಶ್ರೀಮಂತ ಬಾಲಕನಿಗೆ




ಎಲ್ಲವೂ ಸುಲಭವಾಗಿ ಸಿಗುವುದರಿಂದ ಅವನಲ್ಲಿ ಗರ್ವ ಮತ್ತು ವ್ಯಸನ ಬೆಳೆಯುತ್ತದೆ. ಇನ್ನೊಂದೆಡೆ, ಬಡ ಕುಟುಂಬದ ಸತ್ಯಂ ಎಂಬ ಬಾಲಕ ಶ್ರಮ, ಶಿಸ್ತು ಮತ್ತು ದೃಢ ನಿಶ್ಚಯದಿಂದ ಮುಂದೆ ಸಾಗುತ್ತಾನೆ. ಇದು ಸಿನಿಮಾದ ವಸ್ತು ಎಂದರು.

ಚಿತ್ರದಲ್ಲಿ ಮಕ್ಕಳ ಪ್ರತಿಭೆ ಉತ್ತೇಜಿಸುವ ಉದ್ದೇಶದಿಂದ ಸ್ಥಳೀಯ ಮಕ್ಕಳಿಗೆ ಹೆಚ್ಚಿನ ಅವಕಾಶ ನೀಡಲಾಗಿದೆ.

ಪೋಷಕರು ಮತ್ತು ಶಿಕ್ಷಕರು ಕಡ್ಡಾಯವಾಗಿ ಈ ಚಿತ್ರ ನೋಡಬೇಕು. ಇದು ಕುಟುಂಬದೊಂದಿಗೆ ಕುಳಿತು ನೋಡುವಂತ ಪ್ರೇರಣಾದಾಯಕ ಚಿತ್ರವಾಗಿದ್ದು, ಸಮಾಜಕ್ಕೆ ಒಳ್ಳೆಯ ಸಂದೇಶ ನೀಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕಾರಿ ನಿರ್ವಾಹಕ, ನಿರ್ಮಾಪಕ ಮಧು ಮಾತನಾಡಿ, ಸಮಾಜ ಏನಾದರೂ ಕಲಿಯಬೇಕು ಎಂಬ ಉದ್ದೇಶ ನಮ್ಮದು, ಸಮಾಜದಲ್ಲಿ ಸಣ್ಣ ಬದಲಾವಣೆ ಆದರೆ ನಮ್ಮ ಶ್ರಮ ಸಾರ್ಥಕ. ಮಕ್ಕಳನ್ನು ಅಪ್ಪ-ಅಮ್ಮನೇ ಬದಲು ಮಾಡಬೇಕು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಹರೀಶ್, ಗೋಪಾಲ್, ಶಿವಪ್ಪನಾಯಕ, ರವಿ ಕುಮಾರ್ ಇದ್ದರು.

# ಅರಣ್ಯ ಭೂಮಿಯಲ್ಲಿ ಅಕ್ರಮ ಗುಡಿಸಲು: ತನಿಖೆಗೆ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಅರಣ್ಯ ಭೂಮಿಯಲ್ಲಿ ಅಕ್ರಮ ಗುಡಿಸಲುಗಳನ್ನು ಹಾಕಿರುವ ಕುರಿತು ಪಾರದರ್ಶಕ ತನಿಖೆ ನಡೆಸಿ ಕ್ರಮ ಜರುಗಿಸಬೇಕು ಎಂದು ತಾಲೂಕು ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣಗೌಡ ಬಣ) ಅಧ್ಯಕ್ಷ ಗಗನ್ ಹಾಡ್ಲಹಳ್ಳಿ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಈ ಕುರಿತು ಕ್ರಮ ಕೈಗೊಳ್ಳದಿದ್ದರೆ ಉಪವಿಭಾಗಾಧಿಕಾರಿ ಕಚೇರಿ ಎದುರು ಸೋಮವಾರದಿಂದ ಅನಿರ್ದಿಷ್ಟಾವಧಿ ಮುಷ್ಕರ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ದೇವಾಲದಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಡಚಹಳ್ಳಿ ಗ್ರಾಮ (ಹಕ್ಕಿರಿ) ಪ್ರದೇಶದಲ್ಲಿರುವ ಅರಣ್ಯ ಇಲಾಖೆಗೆ ಸೇರಿದ ಸರ್ವೇ ನಂ. 28ರ ಜಾಗದಲ್ಲಿ ಅನಧಿಕೃತವಾಗಿ ಗುಡಿಸಲುಗಳು ನಿರ್ಮಾಣವಾಗಿರುವ ಪ್ರಕರಣ ಬೆಳಕಿಗೆ ಬಂದಿದೆ. ಈ ಪ್ರದೇಶದಲ್ಲಿ ತಮಿಳುನಾಡು ಮೂಲದ ಕೆಲವರು ಅಕ್ರಮವಾಗಿ ನೆಲೆಸಿರುವ ಶಂಕೆ ವ್ಯಕ್ತವಾಗಿದ್ದು, ಪ್ರಕರಣದ ಕುರಿತು




ಸಂಪೂರ್ಣ ಹಾಗೂ ಪಾರದರ್ಶಕ ತನಿಖೆ ನಡೆಸಬೇಕೆಂದು ಒತ್ತಾಯಿಸಿದ್ದಾರೆ. ಹಾನುಬಾಳು ಹೋಬಳಿಯ ಮೂರ್ಕಣ್ಣು ಗುಡ್ಡ ವ್ಯಾಪ್ತಿಯ ಎಂಟು ಗ್ರಾಮಗಳ ರೈತರಿಗೆ ಕರ್ನಾಟಕ ಅರಣ್ಯ ಕಾಯ್ದೆ 1963ರ ಕಲಂ 64(ಎ) ಅಡಿಯಲ್ಲಿ ನೋಟಿಸ್ ಜಾರಿ ಮಾಡಲಾಗುತ್ತಿದೆ. ಕಂದಾಯ ಜಮೀನಿನಲ್ಲಿದ್ದರೂ ಸ್ಥಳೀಯರನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಇದರಿಂದ ಮೂಲ ನಿವಾಸಿಗಳಲ್ಲಿ ಆತಂಕ ಹೆಚ್ಚಾಗಿದೆ. ಆದರೆ ಇದೇ ವೇಳೆ ಅರಣ್ಯ ಪ್ರದೇಶದಲ್ಲೇ ಹೊರರಾಜ್ಯದವರಿಗೆ ಅನಧಿಕೃತ ವಾಸಕ್ಕೆ ಅವಕಾಶ ನೀಡಲಾಗುತ್ತಿರುವುದು ಆಡಳಿತದ ದ್ವಂದ್ವನೀತಿಯನ್ನು ಬಯಲಿಗೆಳೆಯುತ್ತಿದೆ ಎಂದು ಆರೋಪಿಸಿದರು. ಅಕ್ರಮವಾಗಿ ನಿರ್ಮಿಸಲಾದ ಗುಡಿಸಲುಗಳಲ್ಲಿ ಸುಮಾರು 15ರಿಂದ 20 ಮಂದಿ ಹಲವು ತಿಂಗಳುಗಳಿಂದ ವಾಸವಾಗಿದ್ದು, ಜಲ್ ಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರು ಮತ್ತು ಚೆಸ್ಕಾಂ ಮೂಲಕ ವಿದ್ಯುತ್ ಸಂಪರ್ಕವೂ ಒದಗಿಸಲಾಗಿದೆ. ಅಲ್ಲದೆ ಶೌಚಾಲಯ ನಿರ್ಮಾಣಕ್ಕೂ ಮುಂದಾಗಿರುವುದು ಗಮನಾರ್ಹವಾಗಿದ್ದು,ಈ ಎಲ್ಲ ಬೆಳವಣಿಗೆಗಳ ಹಿಂದೆ ಕೆಲ ಸ್ಥಳೀಯ ಪ್ರಭಾವಿ ವ್ಯಕ್ತಿಗಳು ಹಾಗೂ ಅರಣ್ಯ ಇಲಾಖೆಯ ಗುತ್ತಿಗೆ ಸಿಬ್ಬಂದಿಗಳ ಕೈವಾಡವಿರುವ ಅನುಮಾನ ವ್ಯಕ್ತವಾಗಿದೆ. ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಸೋಮವಾರದಿಂದ ತಾಲೂಕು ಉಪವಿಭಾಗಾಧಿಕಾರಿ ಕಚೇರಿ ಮುಂದೆ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

# ಧಾರ್ಮಿಕ ಕ್ಷೇತ್ರಕ್ಕೆ ಶಂಕರಾಚಾರ್ಯರರ ಕೊಡುಗೆ ಅಪಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಧಾರ್ಮಿಕ ಕ್ಷೇತ್ರಕ್ಕೆ ಶಂಕರಾಚಾರ್ಯರ ಕೊಡುಗೆ ಅಪಾರವಾಗಿದೆ ಎಂದು ತಾಲೂಕು ಬ್ರಾಹ್ಮಣ ಸಮಾಜದ ಮಾಜಿ ಅಧ್ಯಕ್ಷ ಸೂರ್ಯನಾರಾಯಣ್ ಹೇಳಿದರು.

ಪಟ್ಟಣದ ಗಾಯತ್ರಿ ಸಭಾ ಭವನದಲ್ಲಿ ಆಯೋಜಿಸಿದ್ದ ಶಂಕರಾಚಾರ್ಯ ಹಾಗೂ ರಾಮಾನುಜಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆದಿ ಶಂಕರಾಚಾರ್ಯರು ಭಾರತೀಯ ಸಂಸ್ಕೃತಿ, ಧರ್ಮ ಮತ್ತು ತತ್ವಜ್ಞಾನವನ್ನು ಹೊಸ ದಿಕ್ಕಿನಲ್ಲಿ ಮುನ್ನಡೆಸಿದ ಮಹಾನ್ ಯೋಗಿ ಹಾಗೂ ಚಿಂತಕರಾಗಿದ್ದರು. ಅಲ್ಪಾಯುಷ್ಯದಲ್ಲಿಯೇ ದೇಶದ ಮೂಲೆ ಮೂಲೆಗಳಲ್ಲಿ ಸಂಚರಿಸಿ ಸನಾತನ ಧರ್ಮದ ಸಾರವನ್ನು ಜನರಿಗೆ ತಲುಪಿಸಿದ ಅಪೂರ್ವ ಸಾಧನೆ ಅವರದ್ದು ಎಂದು ಹೇಳಿದರು.

ಧಾರ್ಮಿಕ ಮೌಲ್ಯಗಳ ಉಳಿವು, ವೇದಾಂತ ತತ್ವಗಳ ಪ್ರಸಾರ ಹಾಗೂ ಸಮಾಜದಲ್ಲಿ ಆತ್ಮ ಜ್ಞಾನ ಮೂಡಿಸುವ ಕಾರ್ಯದಲ್ಲಿ ಶಂಕರಾಚಾರ್ಯರ ಪಾತ್ರ ಅನನ್ಯವಾಗಿದೆ. ಅವರು ಬೋಧಿಸಿದ ಅದ್ವೈತ ತತ್ವವು ಮಾನವ ಜೀವನದ ಸಾರ್ಥಕತೆಯನ್ನು ತಿಳಿಸುವ ಮಹತ್ವದ ಸಂದೇಶವಾಗಿದೆ ಎಂದು ತಿಳಿಸಿದರು.

ಭಾರತದ ನಾಲ್ಕು ದಿಕ್ಕುಗಳಲ್ಲಿ ಮಠಗಳನ್ನು ಸ್ಥಾಪಿಸಿ ಧಾರ್ಮಿಕ ಏಕತೆ ಮತ್ತು ಸಾಂಸ್ಕೃತಿಕ ಬಾಂಧವ್ಯವನ್ನು ಬಲಪಡಿಸಿದ ಮಹಾನ್ ದೃಷ್ಟಿವಂತರಾಗಿದ್ದರು. ಇಂದಿನ ಯುವಜನತೆ ಶಂಕರಾಚಾರ್ಯರ ಆದರ್ಶಗಳನ್ನು ಅಳವಡಿಸಿಕೊಂಡರೆ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ತಾಲೂಕು ಬ್ರಾಹ್ಮಣ ಸಮಾಜದ ಹಿರಿಯರಾದ ಕೇಶವ ಅಯ್ಯಂಗಾರ್ ಮಾತನಾಡಿ,

ರಾಮಾನುಜಾಚಾರ್ಯರು ಭಕ್ತಿ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಸಾರಿದ ಮಹಾನ್ ಆಚಾರ್ಯರಾಗಿದ್ದರು.

ಸಮಾಜದಲ್ಲಿ ಜಾತಿ ಭೇದಭಾವವನ್ನು ತೊಡೆದುಹಾಕಿ ಎಲ್ಲರಿಗೂ ದೇವರ ಭಕ್ತಿ ಮಾರ್ಗವನ್ನು ತೆರೆದವರು ಅವರು ಎಂದು ಹೇಳಿದರು.

ವಿಶಿಷ್ಟಾದ್ವೈತ ತತ್ವದ ಮೂಲಕ ಭಕ್ತಿ ಮತ್ತು ಜ್ಞಾನ ಎರಡನ್ನೂ ಸಮನ್ವಯಗೊಳಿಸಿದ ರಾಮಾನುಜಾಚಾರ್ಯರು ಜನಸಾಮಾನ್ಯರಿಗೆ ಧರ್ಮದ ಸಾರವನ್ನು ಸರಳವಾಗಿ ತಿಳಿಸಿಕೊಟ್ಟರು. ದೇವರ ಸೇವೆಯ ಜೊತೆಗೆ ಮಾನವ ಸೇವೆಯೂ ಸಮಾನ ಮಹತ್ವದ್ದೆಂಬ ಸಂದೇಶವನ್ನು ಅವರು ನೀಡಿದರು.

ರಾಮಾನುಜಾಚಾರ್ಯರು ದೇವಾಲಯ ವ್ಯವಸ್ಥೆ, ಧಾರ್ಮಿಕ ಆಚರಣೆಗಳು ಹಾಗೂ ಸಾಮಾಜಿಕ ಸಾಮರಸ್ಯಕ್ಕೆ ನೀಡಿದ ಕೊಡುಗೆ ಅಪಾರವಾಗಿದೆ. ಅವರ ಆದರ್ಶಗಳು ಇಂದಿನ ಸಮಾಜಕ್ಕೂ ಪ್ರೇರಣೆಯಾಗಿದ್ದು, ಯುವಜನತೆ ಅವರ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಶಂಕರಾಚಾರ್ಯರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಭಜನೆ, ಪ್ರವಚನ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಲಾಯಿತು. ಬ್ರಾಹ್ಮಣರ ಬೀದಿಯಲ್ಲಿ ಒಂದು ಸುತ್ತು ಮರವಣಿಗೆ ಮಾಡಲಾಯಿತು.

ತಾಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಶಿವಪ್ರಕಾಶ್ ಧನಾವತ್, ಉಪಾಧ್ಯಕ್ಷ ರಘೋತ್ತಮ, ಪ್ರಧಾನ ಕಾರ್ಯದರ್ಶಿ ಶಿವಶಂಕರ್, ವಿಪ್ರ ಮಹಿಳಾ ಸಂಘದ ಅಧ್ಯಕ್ಷೆ ಸರೋಜಾ ಶ್ರೀನಿವಾಸ್, ಕಾರ್ಯದರ್ಶಿ ರಮಾ ಸತೀಶ್, ಸಮಾಜದ ಮುಖಂಡರುಗಳಾದ ಮಂಜುನಾಥ ಪ್ರಸಾದ್, ಅನಂತರಾಮ್, ರಘುರಾಮ್, ಶ್ರೀಕಾಂತ್, ವೆಂಕಟೇಶ್ ಹತ್ವಾರ್, ಸುರೇಶ್ ಇತರರಿದ್ದರು.

# ಮಂತ್ರದೇವತೆ-ಕೊರಗಜ್ಜನ ನೇಮೋತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರೇಹಳ್ಳಿ: ಬೇಲೂರು ತಾಲ್ಲೂಕು ಬಿಕ್ಕೋಡು ಹೋಬಳಿ ಲಕ್ಕುಂದ-ದರ್ಬಾರ್ ಪೇಟೆಯಲ್ಲಿ 2ನೇ ವರ್ಷದ ಮಂತ್ರದೇವತೆ ಹಾಗು ಕೊರಗಜ್ಜನ ನೇಮೋತ್ಸವ ದೈವ ಚಾಕರಿ ರವಿ ಅವರ ನೇತೃತ್ವದಲ್ಲಿ ಜರುಗಿತು.

ನೇಮೋತ್ಸವ ಆರಂಭದಲ್ಲಿ ಮನೆಯೊಳಗಡೆ ಪೂಜಿಸಲಾಗುತ್ತಿದ್ದ ಮಂತ್ರ ದೇವತೆಯನ್ನು ಮನೆಯಾಚೆ ತಂದು ಹೂವಿನ ಅಲಂಕಾರ ಮಾಡಿ ಎಲ್ಲರ ಸಮ್ಮುಖದಲ್ಲಿ ಪೂಜೆ ಸಲ್ಲಿಸಿ ಭಕ್ತರಿಗೆ ದರ್ಶನ ನೀಡಿದ ಬಳಿಕ ದೇವತೆಯನ್ನು ಮನೆಯೊಳಗೆ ಪುನಃ ಕರೆದೊಯ್ಯಲಾಯಿತು.

ನೇಮೋತ್ಸವದ ಸಂದರ್ಭ ಮಂತ್ರ ದೇವತೆಗೆ ಗಗ್ಗರ ಸೇವೆಯನ್ನು ನಡೆಸಿದ ನಂತರ ಕೊರಗಜ್ಜನ ಗಗ್ಗರ ಸೇವೆ ನೆರವೇರಿತು. ತುಳುನಾಡಿನ ಸಂಸ್ಕೃತಿಯ ಆಚರಣೆ, ಸಂಪ್ರದಾಯ ಹಾಗೂ ನರ್ತಕರ ನರ್ತನ ಸೇವೆಯನ್ನು ಭಕ್ತಾದಿಗಳು ಭಕ್ತಿ ಭಾವದಿಂದ ವೀಕ್ಷಿಸಿದರು. ಮಂತ್ರ ದೇವತೆ ಹಾಗು ಕೊರಗಜ್ಜನ ಗಗ್ಗರ ಸೇವೆಯಲ್ಲಿ 7 ಮಂದಿ ತಾಸೆಯರು, ಇಬ್ಬರು ನರ್ತಕರು ಮಂಗಳೂರಿನಿಂದ ಆಗಮಿಸಿ ನೇಮೋತ್ಸವವನ್ನು ಯಶಸ್ವಿಯಾಗಿ ನಡೆಸಿಕೊಟ್ಟರು.

ಗ್ರಾಮದ ರವಿ, ಬೇಬಿ, ಶಿವಪ್ಪ, ಆನಂದ, ರೇಖಾ, ಉಮೇಶ್, ಜಯಶ್ರೀ, ಅಜಿತ್, ಗಂಗು ಮತ್ತು ವಿವಿಧ ಗ್ರಾಮಸ್ಥರು ಹಾಜರಿದ್ದರು.

# ಪುರಸಭೆ ಮಳಿಗೆ ಬಾಕಿ ಉಳಿಸಿಕೊಂಡಿದ್ದಕ್ಕೆ ರೇವಣ್ಣ ತರಾಟೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹೊಳೆನರಸೀಪುರ: ಪುರಸಭಾ ವಾಣಿಜ್ಯ ಮಳಿಗೆಗಳ ಬಾಡಿಗೆ ವಸೂಲಿ ಮಾಡದೆ ಅಧಿಕಾರಿಗಳು ಕೋಟ್ಯಾಂತರ ರೂಪಾಯಿ ಬಾಕಿ ಉಳಿಸಿಕೊಂಡು ಸರ್ಕಾರಕ್ಕೆ ನಷ್ಟವುಂಟು ಮಾಡಿದ್ದಾರೆ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಪಟ್ಟಣದ ಪುರಸಭಾ ಸಭಾಂಗಣದಲ್ಲಿ ಮಂಗಳವಾರ ನಡೆದ ತುರ್ತು ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲೇ ಎಲ್ಲೂ ಇಲ್ಲದಷ್ಟು ಆದಾಯದ ಮೂಲಗಳಾಗಿ ವಾಣಿಜ್ಯ ಸಂಕೀರ್ಣಗಳನ್ನು ಪಟ್ಟಣದಲ್ಲಿ ಮಾಡಿದ್ದೇನೆ. 20 ರಿಂದ 50 ಲಕ್ಷ ರೂ. ವರೆಗೂ ಹರಾಜಿನಲ್ಲಿ ಮಳಿಗೆ ಪಡೆಯುವ ವರ್ತಕರು ಬಾಡಿಗೆ ಬಾಕಿ ಉಳಿಸಿಕೊಳ್ಳಲು ಕಾರಣವೇನು. ಅಂತಹವರಿಗೆ ಬಿಲ್ ಕಲೆಕ್ಟರ್‌ಗಳು ಮಣೆ ಹಾಕುತ್ತಿದ್ದಾರೆ ಎಂಬ ಆರೋಪ ಇದೆ. ನಾನು ಇಂತಹದಕ್ಕೆಲ್ಲ ಆಸ್ಪದ ಕೊಡುವುದಿಲ್ಲವೆಂದು ಎಚ್ಚರಿಕೆ ನೀಡಿದರು.

10 ರಿಂದ 12 ಲಕ್ಷ ರೂ. ವರೆಗೆ ಬಾಕಿ ಉಳಿಸಿಕೊಂಡಿರುವ ಪಟ್ಟಿ ಪರಿಶೀಲಿಸಿದ ಅವರು, ವಸೂಲಾತಿ ಜವಾಬ್ದಾರಿ ವಹಿಸಿಕೊಂಡಿರುವ ಮೋಹನ್‌ಕುಮಾರ್ ವಿರುದ್ಧ ತೀವ್ರ ಸಿಡಿಮಿಡಿಗೊಂಡರು. ಮುಂದಿನ ಒಂದು ತಿಂಗಳ ಒಳಗಾಗಿ ಬಾಕಿ ವಸೂಲಿ ಮಾಡಬೇಕೆಂದು ಸೂಚಿಸಿದರು.

ಬೇಸಿಗೆಯ ಬೇಗೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಕುಡಿಯುವ ನೀರಿನ ಪೂರೈಕೆ ಸಮರ್ಪಕತೆಗೆ ಗಮನ ಹರಿಸಬೇಕು. ಪಟ್ಟಣದ ಬಸ್ ನಿಲ್ದಾಣದ ಪ್ರದೇಶದಲ್ಲಿ ಎಲ್ಲೂ ಶುದ್ಧ ಕುಡಿಯುವ ನೀರಿನ ಘಟಕ ಇಲ್ಲ. ಅದರಿಂದ ಪ್ರಯಾಣಿಕರು, ಗ್ರಾಮೀಣ ಜನರು ಪರಿತಪಿಸುವಂತಾಗಿದೆ. ಸೂಕ್ತ ಸ್ಥಳದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಬೇಕೆಂದು ಪುರಸಭೆ ಮುಖ್ಯಾಧಿಕಾರಿ ಶಿವಶಂಕರ್ ಅವರಿಗೆ ಹೇಳಿದರು.

ಪ್ರತಿ ವಾರ್ಡ್‌ಗಳಲ್ಲಿ ವಸತಿ ಹೀನರನ್ನು ಗುರುತಿಸಿ ಪಟ್ಟಿ ಮಾಡುವಂತೆ ಕಳೆದ 6 ತಿಂಗಳಿಂದ ಹೇಳುತ್ತಿದ್ದೇನೆ. ಈಗಾಗಲೇ 1.5 ಸಾವಿರ ಫಲಾನುಭವಿಗಳಿಗೆ ಮನೆ ಕಟ್ಟಿಕೊಳ್ಳಲು ಕೊಳಚೆ ನಿರ್ಮೂಲನಾ ಮಂಡಳಿಯಿಂದ ಸಹಾಯ ಧನ ನೀಡಲಾಗಿದೆ. ಇನ್ನಷ್ಟು ಪ್ರಯೋಜನಕಾರಿಯಾಗಿ ವಸತಿ ಅನುಕೂಲತೆ ಮಾಡಿಕೊಡಲು ಪಟ್ಟಿ ಮಾಡಲು ಸೂಚಿಸಿದ್ದರೂ ಕಾರ್ಯ ರೂಪಿಸದ ನೌಕರ ರಮೇಶ್ ವಿರುದ್ಧ ಅಸಮಧಾನ ವ್ಯಕ್ತಪಡಿಸಿದರು. ಮುಂದಿನ 20 ದಿನಗಳೊಳಗೆ ವಸತಿ ರಹಿತರನ್ನು ಗುರುತಿಸಿ ಪ್ರತಿ ವಾರ್ಡ್‌ನ ಮನೆ ಭೇಟಿ ಮಾಡಿಸುವುದಾಗಿ ಮುಖ್ಯಾಧಿಕಾರಿ ತಿಳಿಸಿದರು.

ಪಟ್ಟಣದಲ್ಲಿ ಯುಜಿಡಿ ಸಂಪರ್ಕ ಸಂಪೂರ್ಣ ವಿಫಲವಾಗಿದೆ. ಈ ಬಗ್ಗೆ ಕಳೆದ 2 ವರ್ಷಗಳಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈಗ 1.26 ಕೋಟಿ ರೂ. ಬಿಡುಗಡೆಗೆ ಕೋರಿದ್ದೇನೆ. ನಿರೀಕ್ಷೆ ಕೈಗೂಡಿದರೆ, ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. ಹೊಸದಾಗಿ ಯುಜಿಡಿ ಕೊಳಚೆ ನೀರು ಸಂಸ್ಕರಣ ಹೊಂಡಗಳನ್ನು ನಿರ್ಮಿಸಿ ಎಲ್ಲವೂ ಹೊಸತಾಗಿ ನಿರ್ಮಿಸಲು ಯೋಜಿಸಲಾಗಿದೆ ಎಂದರು. ಗಾಂಧಿ ವೃತ್ತ ಸೇರಿ ಅರಕಲಗೂಡು ಮಾರ್ಗದ ವರೆಗೆ ರಸ್ತೆ ದುರಸ್ತಿಗೆ ಟೆಂಡರ್ ಕರೆಯಲಾಗಿದೆ. ಸದ್ಯದಲ್ಲೇ ಕಾಮಗಾರಿ ಕೈಗೆತ್ತಿಕೊಳ್ಳಲು ಸೂಚಿಸಿದ್ದೇನೆ ಎಂದರು.

ಪಟ್ಟಣದಲ್ಲಿ ಮಾಂಸ ಮಾರಾಟ ಮಳಿಗೆ ಹೆಚ್ಚಳಗೊಳಿಸಬೇಕಿದೆ. ಮೀನು ಮತ್ತು ಮಾಂಸ ಮಾರಾಟ ಮಳಿಗೆಗಳ ಬಾಡಿಗೆ ಬಾಕಿ ಉಳಿಸಿಕೊಂಡವರ ವಿರುದ್ಧ ಕ್ರಮಕೈಗೊಳ್ಳಿ ಎಂದರು.

# ಮಹಿಳಾ ಮೀಸಲಾತಿ ಮಸೂದೆಗೆ ವಿರೋಧ: ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಮಹಿಳೆಯರಿಗೆ ರಾಜಕೀಯ ಸಬಲೀಕರಣ ನೀಡಬೇಕು ಎಂಬ ಹಿನ್ನೆಲೆಯಲ್ಲಿ ಲೋಕಸಭೆಯಲ್ಲಿ ಮಹಿಳಾ ಮಸೂದೆಯನ್ನು ಜಾರಿಗೊಳಿಸಲು ಮುಂದಾದ ಸಂದರ್ಭದಲ್ಲಿ ಕಾಂಗ್ರೆಸ್ ಮಸೂದೆಯನ್ನು ವಿರೋಧಿಸುವ ಮೂಲಕ ತನ್ನ ಅಸಲಿ ಬಣ್ಣವನ್ನು ದೇಶದ ಜನತೆಗೆ ತಿಳಿಸಿದೆ ಎಂದು ಶಾಸಕ ಹೆಚ್.ಕೆ.ಸುರೇಶ್ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಹೃದಯ ಭಾಗದಲ್ಲಿರುವ ಬಸವೇಶ್ವರ ವೃತ್ತದಲ್ಲಿ ತಾಲ್ಲೂಕು ಬಿಜೆಪಿ ಮಹಿಳಾ ಘಟಕದಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿ, ಮಹಿಳೆಯರು ಎಲ್ಲಾ ಕ್ಷೇತ್ರದಲ್ಲಿ ಅದ್ವಿತೀಯ ಸಾಧನೆ ಮಾಡಿದ್ದಾರೆ. ಒಂದು ಕುಟುಂಬ ಮತ್ತು ಸಮಾಜ ಉನ್ನತಿಗೆ ಹೆಣ್ಣು ಪ್ರಾಮುಖ್ಯತೆ ವಹಿಸುವ ಕಾರಣದಿಂದ ಮಹಿಳೆ ಪ್ರಜಾಪ್ರಭುತ್ವದಲ್ಲಿ ಕೇವಲ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಹಾಗೂ ಪುರಸಭೆ ಮತ್ತು ನಗರಸಭೆಗೆ ಸೀಮಿತವಾಗದೆ ಮಹಿಳೆಯರು ಲೋಕಸಭೆ ಹಾಗೂ ವಿಧಾನಸಭೆ ಕೂಡ ಚುನಾಯಿತರಾಗಿ ಜನಸೇವೆ ಮಾಡಬೇಕು ಎಂಬ ಹಂಬಲದಿಂದ ಲೋಕಸಭೆ ಮಹಿಳಾ ಮೀಸಲಾತಿ ಅನುಷ್ಠಾನಕ್ಕೆ ವಿಶೇಷವಾಗಿ ಕರೆದ ಲೋಕಸಭೆಗೆ ಕಾಂಗ್ರೆಸ್ ರಾಜಕೀಯ ದುರುದ್ದೇಶದಿಂದ ಮಹಿಳಾ ಮೀಸಲಾತಿ ವಿರೋಧ ವ್ಯಕ್ತಪಡಿಸಿರುವುದು ಶೋಚನೀಯ.

ಕಾಂಗ್ರೆಸ್ ಪಕ್ಷದ ಇಂದಿರಾ ಗಾಂಧಿ, ಸೋನಿಯಾ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿಗೆ ಮಾತ್ರ ಸೀಮಿತವಾಗಬೇಕು. ಹಾಗಾದರೆ ದೇಶದ ಮಹಿಳೆಯರು ತಮ್ಮ ಹಕ್ಕುಗಳನ್ನು ಲೋಕಸಭೆ ಮತ್ತು ವಿಧಾನಸಭೆಯಲ್ಲಿ ಮಂಡಿಸಬಾರದೆ ಎಂದು ಕಿಡಿಕಾರಿದ ಅವರು ಕಾಂಗ್ರೆಸ್ ತನ್ನ ತಪ್ಪನ್ನು ತಿದ್ದುಕೊಂಡು ದೇಶದ ಮಹಿಳೆಯರಿಗೆ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಮುಖಂಡ ಬಿ.ಕೆ. ಚಂದ್ರಕಲಾ ಮಾತನಾಡಿ, 12ನೇ ಶತಮಾನದಲ್ಲಿ ವಿಶ್ವಗುರು ಬಸವಣ್ಣನವರು ಹಾಗೂ ಶರಣರು ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸಬೇಕು ಎಂಬ ನಿಟ್ಟಿನಲ್ಲಿ ಅನುಭವ ಮಂಟಪದಲ್ಲಿ ಅವರ ವಚನ ರಚನೆಗೆ ಮತ್ತು ಸಮಾನತೆಯನ್ನು ನೀಡಿದ್ದು ನಿದರ್ಶನಗಳಿಗೆ ಇಂತಹ ಹಾಗೆಯೇ ಡಾ. ಬಿ.ಆರ್ ಅಂಬೇಡ್ಕರ್ ಕೂಡ ಮಹಿಳೆಯರಿಗೆ ಹೆಚ್ಚಿನ ಸಮಾನತೆಯನ್ನು ನೀಡಿದ ಕಾಲಘಟ್ಟದಲ್ಲಿ ಕಾಂಗ್ರೆಸ್ ತನ್ನ ಸ್ವಾರ್ಥಕ್ಕಾಗಿ ಮಹಿಳಾ ಮೀಸಲಾತಿಯಲ್ಲಿ ವಿರೋಧ ವ್ಯಕ್ತಪಡಿಸಿರದ್ದು ನಿಜಕ್ಕೂ ನಾಚಿಕೆಗೇಡಿನ ಸಂಗತಿ ಪ್ರಧಾನಿ ನರೇಂದ್ರ ಮೋದಿ ಅವರು ಯಾವ ಕಾರಣಕ್ಕೂ ಮೀಸಲಾತಿಯನ್ನು ಕೈ ಬಿಡದೆ ಲೋಕಸಭೆಯಲ್ಲಿ ಅಂಗೀಕರಿಸಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಮಹಿಳಾ ತಾಲೂಕು ಅಧ್ಯಕ್ಷೆ ರೇಖಾ ಬಸವರಾಜು ಮಾತನಾಡಿ, ಮಹಿಳೆ ಎಲ್ಲಾ ಕ್ಷೇತ್ರದಲ್ಲೂ ಕೂಡ ತನ್ನದೆಯಾದ ಛಾಪು ಮೂಡಿಸಿದ್ದಾಳೆ. ಆದರೆ ಮಹಿಳೆ ಇತ್ತೀಚಿನ ದಿನಗಳಲ್ಲಿ ಕೆಲವು ಚುನಾವಣೆಗೆ ಸೀಮಿತವಾಗಿರುವುದು ದುರ್ದೈವ. ಇಂತಹ ಸಂದರ್ಭದಲ್ಲಿ ದೇಶದ ನೆಚ್ಚಿನ ಪ್ರಧಾನ ಮಂತ್ರಿ ಆದಂತಹ ನರೇಂದ್ರ ಮೋದಿಯವರು ಸ್ತ್ರೀ ಸಮಾನತೆ ನೀಡಬೇಕು ಹಾಗೂ ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಬೇಕೆಂದು ಮಹಿಳಾ ಮೀಸಲಾತಿ ಜಾರಿಗೆ ಮುಂದಾಗಿರುವುದು ನಿಜಕ್ಕೂ ಸ್ವಾಗತ, ಕಾಂಗ್ರೆಸ್ ತನ್ನ ನೀಚ ಬುದ್ಧಿಯನ್ನು ಬಿಟ್ಟು ಇಂತಹ ಮಸೂದೆಗೆ ಬೆಂಬಲ ನೀಡಬೇಕೆಂದು ಅಗ್ರಹಿಸಿದರು.

ತಾಲ್ಲೂಕು ಬಿಜೆಪಿ ಅಧ್ಯಕ್ಷ ಸಂಜು ಕೌರಿ, ಮುಖಂಡರಾದ ಸಿ.ಎಸ್.ಪ್ರಕಾಶ್, ಅಡಗೂರು ಬಸವರಾಜ್, ಮೀನಾಕ್ಷಿ, ಲಕ್ಷ್ಮಿ, ಪ್ರಕಾಶ, ರಾಘವೇಂದ್ರ, ಮೋಹನ್ ಕುಮಾರ್, ರಮೇಶ್ ಹಾಜರಿದ್ದರು.

# ಅರೇಹಳ್ಳಿಯಲ್ಲಿ ಎಚ್ ಪಿವಿ ಲಸಿಕಾಕರಣ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರೇಹಳ್ಳಿ: ಬೇಲೂರು ತಾಲೂಕು ಅರೇಹಳ್ಳಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಎಚ್‌ಪಿವಿ ಲಸಿಕೆ ಬಗ್ಗೆ ಪೋಷಕರಿಗೆ ಹಾಗೂ 14 ವರ್ಷ ವಯಸ್ಸಿನ ಹೆಣ್ಣು ಮಕ್ಕಳಿಗೆ ಮಾಹಿತಿ ನೀಡಲಾಯಿತು. ಈ ವೇಳೆ ಮಕ್ಕಳ ತಜ್ಞೆ ಡಾ.ಅನುಪಮಾ ಮಾತನಾಡಿ, ಲಸಿಕೆ ಹಾಗೂ ಇದರಿಂದ ಆಗುವ ಪ್ರಯೋಜನಗಳ ಬಗ್ಗೆ ಎಲ್ಲರೂ ತಿಳಿದುಕೊಳ್ಳಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಲಸಿಕೆ ಕುರಿತು ಹಬ್ಬಿಸಲಾಗುತ್ತಿರುವ ಸುಳ್ಳು ಸುದ್ದಿಯನ್ನು ಯಾರೂ ಸಹ ನಂಬಬಾರದು. ಗರ್ಭಕಂಠದ ಕಾನ್ಸ ರ್ ಅನ್ನು ಭವಿಷ್ಯದಲ್ಲಿ ತಡೆಗಟ್ಟುವ ನಿಟ್ಟಿನಲ್ಲಿ 14 ವರ್ಷ ವಯಸ್ಸಿನ ಎಲ್ಲಾ ಮಕ್ಕಳು ಕಡ್ಡಾಯವಾಗಿ ಲಸಿಕೆ ಹಾಕಿಸಿಕೊಳ್ಳಬೇಕು.ಇದಕ್ಕೆ ಪೋಷಕರು ಸಹ ಸಹಕಾರ ನೀಡಬೇಕು ಎಂದರು.

ಸಿಬ್ಬಂದಿಗಳಾದ ತಾಸೀನಾ ರಜಾಕ್, ಶೃತಿ, ಮಕ್ಕಳ ಪೋಷಕರು ಹಾಗೂ ಆಶಾ ಕಾರ್ಯಕರ್ತೆಯರು ಇದ್ದರು.

# ದಿಡಗ ಸಹಕಾರ ಸಂಘಕ್ಕೆ ಯೋಗೇಶ್ ಅಧ್ಯಕ್ಷ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ತಾಲೂಕಿನ ದಿಡಗ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಉಳ್ಳಾವಳ್ಳಿ ಗ್ರಾಮದ ಎಚ್.ಕೆ.ಯೋಗೇಶ್ 3ನೇ ಬಾರಿಗೆ ಬುಧವಾರ ಅವಿರೋಧ ಆಯ್ಕೆಯಾದರು.

ಇತ್ತೀಚೆಗೆ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಿಗದಿಯಾಗಿತ್ತು. ಅದರಂತೆ ಚುನಾವಣಾ ಪ್ರಕ್ರಿಯೆ ಪ್ರಾರಂಭಗೊಂಡಿದ್ದು ಅಧ್ಯಕ್ಷ ಸ್ಥಾನಕ್ಕೆ ಎಚ್.ಕೆ.ಯೋಗೇಶ್ ಹೊರತುಪಡಿಸಿ ಮತ್ಯಾರು ನಾಮಪತ್ರ ಸಲ್ಲಿಸದ ಕಾರಣ ಅವರನ್ನೇ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ನೂತನ ಅಧ್ಯಕ್ಷ ಹೆಚ್.ಕೆ.ಯೋಗೇಶ್ ಮಾತನಾಡಿ, ಶಾಸಕ ಸಿ.ಎನ್.ಬಾಲಕೃಷ್ಣ ಅವರ ಮಾರ್ಗದರ್ಶನ ಹಾಗೂ ಸಂಘದ ಎಲ್ಲಾ ನಿರ್ದೇಶಕರ ಸಹಕಾರದೊಂದಿಗೆ ಸಂಘದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದು ಹೇಳಿದರು.

ಇದಕ್ಕೂ ಮೊದಲು ಪ್ರಥಮ ಬಾರಿಗೆ ಸಂಘದ ಅಧ್ಯಕ್ಷನಾಗಿದ್ದ ವೇಳೆ ಶಾಸಕರ ಸಹಕಾರ ಪಡೆದು ನಿರ್ದೇಶಕರ ವಿಶ್ವಾಸದೊಂದಿಗೆ ಹಳೆ ಕಟ್ಟಡವನ್ನು ತೆರವುಗೊಳಿಸಿ ನೂತನ ಕಟ್ಟಡ ನಿರ್ಮಿಸಲಾಗಿದೆ ಎಂದು ತಿಳಿಸಿದರು.

ಸಂಘವು 3,200 ಷೇರುದಾರ ಸದಸ್ಯರನ್ನು ಹೊಂದಿದ್ದು, ಕೆಸಿಸಿ 13.64 ಕೋಟಿ ರೂ. ಹಾಗೂ ಎಚ್‌ಎಸ್‌ವಿ 2.44 ಕೋಟಿ ರೂ. ಸೇರಿ 16 ಕೋಟಿ ರೂ. ಸಾಲ ಸೌಲಭ್ಯ ನೀಡಲಾಗಿದೆ. ಇನ್ನೂ 3 ಕೋಟಿ ರೂ. ಅಗತ್ಯವಿದ್ದು ಕಲ್ಪಿಸುವಂತೆ ಶಾಸಕರಿಗೆ ಮನವಿ ಮಾಡಲಾಗಿದೆ. ಶೀಘ್ರದಲ್ಲಿಯೇ ಹೆಚ್ಚಿನ ಅನುದಾನ ತಂದು ಷೇರುದಾರ ಸದಸ್ಯರಿಗೆ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ವ್ಯಾಪ್ತಿಯ ರೈತರು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಹೈನುಗಾರಿಕೆಯಲ್ಲಿ ತೊಡಗಿದ್ದು ಶೂನ್ಯ ಬಡ್ಡಿ ದರದಲ್ಲಿ ಅಗತ್ಯ ಸಾಲ ಸೌಲಭ್ಯ ಕಲ್ಪಿಸಿದರೆ ಬದುಕನ್ನು ಸದೃಢವಾಗಿ ಕಟ್ಟಿಕೊಳ್ಳಲು ಸಹಕಾರಿಯಾಗಲಿದೆ. ಕೇವಲ 10 ಗುಂಟೆ ಜಮೀನು ಹೊಂದಿರುವ ರೈತರಿಗೂ ಸಹ ಸಾಲ ನೀಡುವ ವ್ಯವಸ್ಥೆ ಮಾಡಲಾಗಿದೆ ಎಂದರು.

ತಾಲ್ಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ ವಿಜಯೇಂದ್ರ ಚುನಾವಣಾ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದರು. ಅಧ್ಯಕ್ಷ ಸ್ಥಾನಕ್ಕೆ ವಿರೋಧವಾಗಿ ಆಯ್ಕೆಯಾದ ಹೆಚ್.ಕೆ.ಯೋಗೇಶ್ ಅವರನ್ನು ಕಾರ್ಯಕರ್ತರು ಹಾಗೂ ಅಭಿಮಾನಿಗಳು ಅಭಿನಂದಿಸಿದರು. ಸಿಹಿ ಹಂಚಿ ಸಂಭ್ರಮಿಸಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಪುಟ್ಟರಾಜು, ಎಂ.ಆರ್. ವಾಸು, ಎಪಿಎಂಸಿ ಮಾಜಿ ಅಧ್ಯಕ್ಷ ಉಗೇನಹಳ್ಳಿ ರಘುರಾಂ, ಸಂಘದ ಮಾಜಿ ಅಧ್ಯಕ್ಷ ತಾತೇಗೌಡ, ಉಪಾಧ್ಯಕ್ಷ ಕುಮಾರ್, ನಿರ್ದೇಶಕರಾದ ಟಿ.ಎಸ್.ಮಧು, ಬಾಲು, ಎಚ್.ಎಸ್.ಮಹೇಶ್, ಲೋಕೇಶ್, ವೆಂಕಟೇಶ್, ಜಯಮ್ಮ, ಸುಮಿತ್ರ, ತುಳಸಿ, ಕಾರ್ಯನಿರ್ವಹಣಾಧಿಕಾರಿ ನಿಂಗಮ್ಮ, ಸಿಬ್ಬಂದಿ ವರ್ಗ ಹಾಗೂ ಇತರರು ಇದ್ದರು.

# ಸ್ವಾಭಿಮಾನ ಭಾವಸಾರ ಕ್ಷತ್ರಿಯ ಸಮಾಜದ ಧ್ಯೇಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಸೀಕೆರೆ: ರುಕ್ಮಿಣಿ ಪಾಂಡುರಂಗನಲ್ಲಿ ಅಚಲ ಭಕ್ತಿ ಕೈ ಕಸಿಬಿನ ಮೇಲೆ ನಂಬಿಕೆ ಸ್ವಾಭಿಮಾನದ ಬದುಕು ಇದು ಭಾವಸಾರ ಕ್ಷತ್ರಿಯ ಸಮಾಜದ ವೈಶಿಷ್ಟ ಎಂದು ತಾಲೂಕು ಒಕ್ಕಲಿಗರ ಸಮಾಜದ ಅಧ್ಯಕ್ಷ ಆರ್. ಅನಂತಕುಮಾರ್ ಹೇಳಿದರು.

ನಗರದ ರುಕ್ಮಿಣಿ ಪಾಂಡುರಂಗ ದೇವಾಲಯದಲ್ಲಿ ಭಾವಸಾರ ಕ್ಷತ್ರಿಯ ಸಮಾಜದ ವತಿಯಿಂದ ಆಯೋಜಿಸಿದ್ದ 89ನೇ ದಿಂಡಿ ಮಹೋತ್ಸವದಲ್ಲಿ ಮಾತನಾಡಿದ ಅವರು, ಯುಗ ಯುಗಾಂತರದ ಇತಿಹಾಸ ಹೊಂದಿರುವ ಭಾವಸಾರ ಕ್ಷತ್ರಿಯ ಸಮಾಜ ಇತರ ಸಮಾಜಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿದೆ.

ವಸ್ತ್ರ ವಿನ್ಯಾಸದಲ್ಲಿ ಸಿದ್ಧಹಸ್ತರಾಗಿರುವ ಭಾವಸಾರ ಕ್ಷತ್ರಿಯ ಸಮಾಜದ ಬಹುತೇಕ ಮಂದಿ ಟೈಲರಿಂಗ್ ವೃತ್ತಿಯಲ್ಲಿ ಬದುಕು ಕಟ್ಟಿಕೊಂಡು ಬಂದಿದೆ ಎಂದರು.

ಟೈಲರಿಂಗ್ ವೃತ್ತಿ ಒಂದು ಶ್ರೇಷ್ಟ ವೃತ್ತಿಯಾಗಿದೆ. ಆದರೂ ಸಹ ಪ್ರಸ್ತುತ ಸಮಾಜ ಆಧುನಿಕತೆಯ ನಾಗಾಲೋಟದಲ್ಲಿ ಸಾಗುತ್ತಿದ್ದು ಭಾವಸಾರ ಕ್ಷತ್ರಿಯ ಸಮಾಜದ ಬಾಂಧವರು ತಮ್ಮ ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡುವ ಮೂಲಕ ಇತರ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಪ್ರೇರಣೆ ನೀಡಿ ಎಂದು ಕಿವಿಮಾತು ಹೇಳಿದರು.

ಬಂಕಾಪುರದ ರುಕ್ಮಿಣಿ ಪಾಂಡುರಂಗ ದೇವಾಲಯದ ಗುರುಗಳಾದ ಭಾನುದಾಸ್ ಸರ್ವದೆ ಮಾತನಾಡಿ, ಯಾವುದೇ ಸಂಘಟನೆಯಾಗಲಿ ಅಥವಾ ಸಂಘ ಸಂಸ್ಥೆಗಳಾಗಲಿ ನಿರಂತರವಾಗಿ ಒಂದು ಕಾರ್ಯಕ್ರಮವನ್ನಾಗಲಿ, ಸಾಂಪ್ರದಾಯಿಕ ಆಚರಣೆಗಳನ್ನಾಗಲಿ ಮುನ್ನಡೆಸಿಕೊಂಡು ಬರುವುದು ಕಷ್ಟಸಾಧ್ಯ.

ಆದರೆ ಇಲ್ಲಿನ ಭಾವಸಾರ ಕ್ಷತ್ರಿಯ ಸಮಾಜ ನಿರಂತರವಾಗಿ 89 ವರ್ಷಗಳ ಕಾಲ ದಿಂಡಿ ಮಹೋತ್ಸವ ಆಚರಿಸುತ್ತಾ ರುಕ್ಮಿಣಿ ಪಾಂಡುರಂಗನ ಅನುಗ್ರಹಕ್ಕೆ ಪಾತ್ರವಾಗುತ್ತಾ ಬಂದಿರುವುದು ಇತರರಿಗೆ ಆದರ್ಶವಾಗಿದೆ ಎಂದರು.

ಸಮಾರಂಭದಲ್ಲಿ ಭಾವಸಾರ ಕ್ಷತ್ರಿಯ ಸಮಾಜದ ಗೌರವ ಅಧ್ಯಕ್ಷ ಕೃಷ್ಣಮೂರ್ತಿ, ಅಧ್ಯಕ್ಷ ನರೇಶ್, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಟಿ.ಆನಂದ್, ಮಾಜಿ ಅಧ್ಯಕ್ಷ ರಾಮಚಂದ್ರ, ಉಪಾಧ್ಯಕ್ಷ ಹೇಮಂತ್ ಕುಮಾರ್, ಪ್ರಧಾನ ಕಾರ್ಯದರ್ಶಿ ಎಸ್.ವಿ.ನವೀನ್ ಕುಮಾರ್ ಉಪಸ್ಥಿತರಿದ್ದರು.

ಉತ್ಸವ: ಸಂಜೆ ರುಕ್ಮಿಣಿ ಸಮೇತನದ ಪಾಂಡುರಂಗ ಸ್ವಾಮಿಯ ಉತ್ಸವ ಮೂರ್ತಿಯನ್ನು ನಗರದ ಪ್ರಮುಖ ರಸ್ತೆಗಳಲ್ಲಿ ಉತ್ಸವ ಮಾಡಲಾಯಿತು. ಭಾವಸಾರ ಕ್ಷತ್ರಿಯ ಸಮಾಜದ ನೂರಾರು ಮಂದಿ ಪಾಲ್ಗೊಂಡಿದ್ದರು.

# ಇತಿಹಾಸದಲ್ಲಿ ಈ ದಿನ

## ಏಪ್ರಿಲ್-23

1995: ಯುನೆಸ್ಕೋವು ಈ ದಿನವನ್ನು ವಿಶ್ವ ಪುಸ್ತಕ ದಿನವಾಗಿ ಘೋಷಿಸಿತು
1751: ಆರ್ಕಾಟ್ ಯುದ್ಧ ಆರಂಭ
1942: ಭಾರತೀಯ ರಾಷ್ಟ್ರೀಯ ಸೇನೆಗೆ ಸಂಬಂಧಿಸಿದ ಪ್ರಮುಖ ಬೆಳವಣಿಗೆಗಳು

### ಜನನ

1564: ವಿಲಿಯಂ ಶೇಕ್ಸ್‌ಪಿಯರ್, ಇಂಗ್ಲಿಷ್ ನಾಟಕಕಾರ
1969: ಮನೋಜ್ ಬಾಜಪೇಯಿ, ಭಾರತೀಯ ನಟ

### ಮರಣ

1616: ವಿಲಿಯಂ ಶೇಕ್ಸ್‌ಪಿಯರ್
1616: ಮಿಗೇಲ್ ಡಿ ಸರ್ವಾಂಟಿಸ್

# ಅಕ್ರಮ ಮದ್ಯ ಮಾರಾಟ: ಕಡಿವಾಣಕ್ಕೆ ಗ್ರಾಮಸ್ಥರ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ತಾಲೂಕಿನ ಬಿಕ್ಕೋಡು ಹೋಬಳಿ ಕುಶಾವರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಚಿಲ್ಲರೆ ಅಂಗಡಿ ಹಾಗೂ ಕೆಲವು ಮನೆಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದ್ದು, ಅದರಿಂದ ಗ್ರಾಮದ ನೆಮ್ಮದಿ ಹಾಳಾಗುವುದಲ್ಲದೆ ಅನೇಕ ಸಾವು-ನೋವು ಸಂಭವಿಸಿದ್ದು, ಮದ್ಯ ಮಾರಾಟ ತಡೆಗಟ್ಟಲು ಮಂಗಳವಾರ ಗ್ರಾಪಂ ವ್ಯಾಪ್ತಿಯ ಗ್ರಾಮಗಳ ಗ್ರಾಮಸ್ಥರು ಸ್ಥಳೀಯ ಪಂಚಾಯಿತಿ ಆವರಣದಲ್ಲಿ ಅಬಕಾರಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮದ್ಯ ಮುಕ್ತ ಮಾಡಲು ತೀರ್ಮಾನಿಸಲಾಯಿತು.

ಕುಡುಕರ ಹಾವಳಿಯಿಂದ ಕೆಲವು ಗ್ರಾಮಗಳಲ್ಲಿ ರಾತ್ರಿ ವೇಳೆ ಮಹಿಳೆಯರು-ಮಕ್ಕಳು ನೆಮ್ಮದಿಯಿಂದ ಜೀವನ ನಡೆಸಲು ಸಾಧ್ಯವಾಗುತ್ತಿಲ್ಲ. ದುಡಿಯುವ ಅರ್ಧದಷ್ಟು ಹಣ, ಎಣ್ಣೆ ಮಾರುವವರ ಕೈ ಸೇರುತ್ತದೆ, ಅಧಿಕಾರಿಗಳು ಎಚ್ಚೆತ್ತುಕೊಂಡು ಕಡಿವಾಣ ಹಾಕಿ, ಗ್ರಾಮದಲ್ಲಿ ಶಾಂತಿ ನೆಮ್ಮದಿಯಿಂದ ಜೀವಿಸಲು ಅವಕಾಶ ಮಾಡಿಕೊಡಬೇಕೆಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಒಕ್ಕೊರಲಿನಿಂದ ಆಗ್ರಹಿಸಿದರು.

ಸಾಮಾಜಿಕ ಹೋರಾಟಗಾರ ಕೌರಿ, ರೇಣುಕುಮಾರ್ ಮಾತನಾಡಿ, ಕುಶಾವರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ಯಾವುದೇ ಭಯವಿಲ್ಲದೆ ನಡೆಯುತ್ತಿದೆ. ಯುವಕರು ಕುಡಿತಕ್ಕೆ ದಾಸರಾಗಿ ಕುಟುಂಬದ ನೆಮ್ಮದಿಯನ್ನು ಹಾಳು ಮಾಡುವುದಲ್ಲದೆ ಜೀವ ಕಳೆದುಕೊಳ್ಳುತ್ತಿದ್ದಾರೆ. ಅಬಕಾರಿ ಅಧಿಕಾರಿಗಳು ಮಾತ್ರ ಅಕ್ರಮ ಮದ್ಯ ಮಾರಾಟಗಾರರು ಯಾರೆಂದು ತಿಳಿದರೂ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದರು.


Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248